# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ



**ಸುಭಾಷಿತ:**

ಯಾರಿಗಾದರು ನಿನ್ನಿಂದ ಯಾವುದೇ ಸಹಾಯದ ಅಗತ್ಯವಿದೆಯೋ ಅದನ್ನು ಬಹಳ ಪ್ರೀತಿಯಿಂದ ಮಾಡು. ಅದರ ಆ ಸಹಾಯದಿಂದ ನೀನು ಏನನ್ನೂ ಕೂಡ ನಿರೀಕ್ಷಿಸಬೇಡ. ನೀನು ಮಾಡಿದ ಆ ಸಹಾಯ ಯಾವುದೇ ಕಾರಣಕ್ಕೂ ವ್ಯರ್ಥ ಆಗಲಾರದು. ನೀನು ತೊಂದರೆ ಯಲ್ಲಿದ್ದಾಗ ಅದು ಒಂದಲ್ಲ ಒಂದು ರೂಪದಲ್ಲಿ ಬಂದು ನೆರವಾಗುತ್ತದೆ

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 27-02-2026 to 05-03-2026 ಬೆಲೆ:10-00 ಸಂಪುಟ–1 ಸಂಚಿಕೆ–22 ಪುಟಗಳು–6







ಮಾರ್ಚ್ 3ರಂದು ಆಕಾಶದಲ್ಲಿ ಒಂದು ವಿಶೇಷ ಖಗೋಳ ಘಟನೆ ನಡೆಯಲಿದೆ. ಈ ದಿನದಂದು 'ಬ್ಲಡ್ ಮೂನ್' ಎಂದೂ ಕರೆಯಲ್ಪಡುವ ಸಂಪೂರ್ಣ ಚಂದ್ರಗ್ರಹಣ ಸಂಭವಿಸುತ್ತದ್ದು, ಅದರ ಪೂರ್ಣ ಹಂತದಲ್ಲಿ ಚಂದ್ರನು ಕೆಂಪು ಅಥವಾ ತಾಮ್ರ ಬಣ್ಣದಲ್ಲಿ ಕಾಣಿಸಿಕೊಳ್ಳುತ್ತಾನೆ. ಮಾರ್ಚ್ 3ರ ಪೂರ್ಣ ಚಂದ್ರಗ್ರಹಣವು ಏಷ್ಯಾ, ಆಸ್ಟ್ರೇಲಿಯಾ, ಉತ್ತರ ಅಮೆರಿಕಾ ಮತ್ತು ದಕ್ಷಿಣ ಅಮೆರಿಕಾದ ಕೆಲವು ಭಾಗಗಳಲ್ಲಿ ಗೋಚರಿಸುತ್ತದೆ. ಯುರೋಪ್ ಮತ್ತು ಆಫ್ರಿಕಾದ ಕೆಲವು ಭಾಗಗಳಲ್ಲಿ ಇದು ಸಂಪೂರ್ಣವಾಗಿ ಗೋಚರಿಸದಿರಬಹುದು. ಇದು 2026ರ ಏಕೈಕ ಸಂಪೂರ್ಣ ಚಂದ್ರಗ್ರಹಣವಾಗಿದ್ದು, ಮುಂದಿನ ಗ್ರಹಣವು 2028ರ ಅಂತ್ಯದವರೆಗೆ ಸಂಭವಿಸುವುದಿಲ್ಲ.

## ಎಷ್ಟು ಬಾರಿ ಸಾಬೀತು ಮಾಡಬೇಕು –ಪರಮೇಶ್ವರ್



**ಬೆಂಗಳೂರು:** ಅಧಿಕಾರ ಹಸ್ತಾಂತರ ದಿನದಿಂದ ದಿನಕ್ಕೆ ಜಟಿಲ ವಾಗುತ್ತಿರುವ ನಡುವೆ ಮುಖ್ಯಮಂತ್ರಿ ಹುದ್ದೆಗೆ ನಾನು ಸಮರ್ಥ ಎಂದು ಎಷ್ಟು ಬಾರಿ ಸಾಬೀತು ಮಾಡಬೇಕು? ದಾಖಲೆಯ 8 ವರ್ಷ ಪಕ್ಷದ ಅಧ್ಯಕ್ಷರಾಗಿದ್ದು ಅರ್ಹತೆಯಲ್ಲವೇ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಪ್ರಶ್ನಿಸಿದ್ದಾರೆ. ನಾಯಕತ್ವ ಗೊಂದಲದ ನಡುವೆ ದಲಿತ ಸಿಎಂ ಚರ್ಚೆ ಶುರುವಾಗಿರುವ ಸಂದರ್ಭದಲ್ಲಿ ಪರಮೇಶ್ವರ ಅವರ ಈ ಹೇಳಿಕೆ ಕೆಲವರ ಗೊಂದಲಕ್ಕೆ ಕಾರಣ ವಾಗಿದೆ. ಸುದ್ದಿಗಾರರ ಜತೆ ಮಾತನಾಡುವಾಗ ಶಾಸಕ ಕೆ. ಎನ್. ರಾಜಣ್ಣ ಹೇಳಿಕೆಯನ್ನು ಪ್ರಸ್ತಾಪಿಸಿ, ದಾಖಲೆ ಅವಧಿಗೆ 8 ವರ್ಷಗಳ ಕಾಲ ಪಕ್ಷದ ಅಧ್ಯಕ್ಷ, ಡಿಸಿಎಂ ಆಗಿದ್ದೆ, ಎರಡು ಸಲ ಗೃಹ ಸಚಿವ, ಎರಡು ಸಲ ಪಕ್ಷ ಅಧಿಕಾರಕ್ಕೆ ತರಿಸಿದ್ದೆ. ಈ ಎಲ್ಲ ಅರ್ಹತೆ ಮತ್ತು ಸಾಮರ್ಥ್ಯ ಇದೆ ಎಂದು ಸಮರ್ಥಿಸಿದ್ದಾರೆ. ಸಾಮರ್ಥ್ಯ ಇಲ್ಲದೇ ಅಧ್ಯಕ್ಷನಾಗಿ 8 ವರ್ಷ ಕೆಲಸ ಮಾಡಿದ್ದೇನಾ? **3ನೇ ಪುಟಕ್ಕೆ**

## ಮಂಗಳೂರಿಗೆ ಮೊದಲ ಪರಿಸರ ಸ್ನೇಹಿ ಖಾಸಗಿ ಬಸ್





**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುಮಾರು 100 ಸರಕಾರಿ ಇವಿ ಬಸ್‌ಗಳು ರಸ್ತೆಗಿಳಿಯಲಿದೆ ಎಂಬ ಸುದ್ದಿ ಮಂಗಳೂ ರಿಗರಿಗೆ ಸಂತಸ ತಂದಿತ್ತು. ಆದರೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಖಾಸಗಿ ಬಸ್ಸುಗಳ ಓಡಾಟ ಅತೀ ಹೆಚ್ಚು ಎನ್ನಬಹುದು. ಇಲ್ಲಿಯ ಜನರು ಖಾಸಗಿ ಬಸ್ಸುಗಳಿಗೆ ಹೆಚ್ಚು ಪ್ರಾಮುಖ್ಯತೆ ಕೊಡುತ್ತಾರೆ. ಆದರೆ ಕಾಂಗ್ರೆಸ್ ಸರಕಾರದ ಗ್ಯಾರಂಟಿ ಯೋಜನೆಯ ನಂತರ ಅಲ್ಲಲ್ಲಿ ಸರಕಾರಿ ಬಸ್‌ಗಳಿಗಾಗಿ ಬೇಡಿಕೆ ಹೆಚ್ಚಾಗ ತೊಡಗಿದೆ ಎಂದರೆ ತಪ್ಪಾಗಲಾರದು. ದಕ್ಷಿಣ ಕನ್ನಡ ಜಿಲ್ಲೆಯ ಸಾರಿಗೆ **3ನೇ ಪುಟಕ್ಕೆ**

## ಕರಾವಳಿಗೆ ಎಐ ಡೇಟಾ ಹಬ್




**ಬೆಂಗಳೂರು:** ಇಎಸ್‌ಡಿಎಂ ವಲಯದ ಬೆಳವಣಿಗೆಗೆ ಪೂರಕವಾಗಿ ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ರಾಜ್ಯದ ಹಲವು ಕಡೆ ನಾನಾ ಸಾಮರ್ಥ್ಯದ ಎಐ ಡಾಟಾ ಸೆಂಟರ್ ಅಭಿವೃದ್ಧಿ ಪಡಿಸಲಾಗುವುದು. ಈ ಸಂಬಂಧ ಸದ್ಯದಲ್ಲೇ ಇಂಧನ ಮತ್ತು ಐಟಿ ಸಚಿವರ ಜತೆ ಸಭೆ ನಡೆಸಲಾಗು ವುದು ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಖನಿಜ ಭವನ ದಲ್ಲಿ ಆಯೋಜಿಸಿದ್ದ ಇಎಸ್‌ಡಿಎಂ ಮತ್ತು ಕೋರ್ ಮ್ಯಾನುಫ್ಯಾಕ್ಚರಿಂಗ್ ವಿಷನ್ ಗ್ರೂಪುಗಳ ಸಭೆಯಲ್ಲಿ ಮಾತನಾಡಿದ ಅವರು, 3ರೀತಿಯ ಡಾಟಾ ಸೆಂಟರ್‌ಗಳು ಇದ್ದು, 500 ಮೆಗಾವ್ಯಾಟ್ ಮತ್ತು ಅದಕ್ಕಿಂತ ದೊಡ್ಡ ಸಾಮರ್ಥ್ಯದ ಹೈಬರ್ಷ್‌ಕೇಲರ್ ಡಾಟಾ **3ನೇ ಪುಟಕ್ಕೆ**






# ಸುದ್ದಿ ತುಣುಕು

ಮಂಗಳೂರಲ್ಲಿ ಮೊದಲ ಬಾರಿಗೆ ಖಾಸಗಿ ವಲಯವು ಇವಿ ಬಸ್ ಪ್ರಯೋಗಕ್ಕೆ ಮುಂದಾಗಿದೆ. ಇದು ಯಶಸ್ವಿಯಾದರೆ ಇತರ ನಗರಗಳಿಗೂ ಮಾದರಿಯಾಗಲಿದೆ.

ಬೈಲಾ ನಿಯಮಗಳ ಉಲ್ಲಂಘನೆ ಆರೋಪದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ (ರಿ) ವಿರುದ್ಧದ ವಿಚಾರಣೆಗೆ ಹೈಕೋರ್ಟ್ ತಡೆ ನೀಡಿದೆ.

ಕೊಪ್ಪಳ ಜಿಲ್ಲೆಯ 138ಕ್ಕೂ ಅಧಿಕ ರೆಸಾರ್ಟ್‌ಗಳ ಮೇಲೆ ಅಧಿಕಾರಿಗಳು ದಾಳಿ ಮಾಡಿ, ಪತ್ತೆಯಾದ ಅನಧಿಕೃತ ರೆಸಾರ್ಟ್‌ಗಳನ್ನು ಬಂದ್ ಮಾಡಲಾಗಿದೆ.

ಒಳಮೀಸಲಾತಿ ಸಮಸ್ಯೆಯಿಂದ ನೇಮಕಾತಿ ಸಮಸ್ಯೆಯಾಗಿದೆ. ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತೇವೆ. ಈ ಬಗ್ಗೆ ಬಜೆಟ್‌ನಲ್ಲಿಯೂ ಘೋಷಣೆ ಮಾಡುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ತಾಯಿಗೆ ರಜೆ ನಿರಾಕರಿಸಿದರೆ, ಅದು ಮಕ್ಕಳ ಮೇಲೆ ಒತ್ತಡವಾಗಬಹುದು. ಸಿಸಿಎಲ್ ರಜೆ ಮಗುವಿನ ಹಕ್ಕು ಎಂದು ಹೈಕೋರ್ಟ್ ತಿಳಿಸಿದೆ.

ಅಕ್ರಮ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧಿತರಾಗಿರುವ ನಟಿ ರನ್ಯಾ ರಾವ್ ಸೇರಿದಂತೆ ಮೂವರ ವಿರುದ್ಧ ಜಾರಿ ನಿರ್ದೇಶನಾಲಯ ಪ್ರಾಸಿಕ್ಯೂಷನ್ ದೂರು ದಾಖಲಿಸಿದೆ.

ಸಾವಿರಾರು ಉದ್ಯೋಗಾಕಾಂಕ್ಷಿಗಳು ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಂತೆ ಬೀದಿಗಿಳಿದು ಆಗ್ರಹಿಸುತ್ತಿರುವ ಸಂದರ್ಭದಲ್ಲೇ ಪ್ರತಿಪಕ್ಷ ಬಿಜೆಪಿಯಿಂದಲೂ ಸರ್ಕಾರದ ಮೇಲೆ ಒತ್ತಡ ಹೆಚ್ಚಿದೆ.

ಭಾರತ-ಯುರೋಪ್ ನಡುವೆ ಸರಕು ಸಾಗಣೆ ಸಂಪರ್ಕ ಬಲಪಡಿಸಲು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬೆಂಗಳೂರು ಮತ್ತು ಫ್ರಾಂಕ್‌ಫರ್ಟ್ ವಿಮಾನ ನಿಲ್ದಾಣಗಳ ನಡುವೆ ಒಪ್ಪಂದ ಮಾಡಿಕೊಂಡಿದೆ.

ಕಬ್ಬು ಬೆಳೆಗಾರರಿಗೆ ಪ್ರತಿ ಟನ್‌ಗೆ 50 ರೂ. ಆರ್ಥಿಕ ನೆರವು ನೀಡುವ ಸಲುವಾಗಿ ರಾಜ್ಯ ಸರ್ಕಾರವು 300ಕೋಟಿ ಹಣ ಬಿಡುಗಡೆಗೊಳಿಸಿದೆ.

ಮೊದಲ ಬಾರಿಗೆ ವಿಧಾನಸಭೆಗೆ ಆಯ್ಕೆಯಾದ ಕಾಂಗ್ರೆಸ್ ಶಾಸಕರು ಹೈಕಮಾಂಡ್‌ಗೆ ಸಚಿವ ಸ್ಥಾನಕ್ಕಾಗಿ ಪತ್ರ ಬರೆದ ಬೆನ್ನಲ್ಲೇ, ವಿಧಾನಪರಿಷತ್ ಸದಸ್ಯರೂ ಸಹ ಅದೇ ನಡೆಯನ್ನು ಅನುಸರಿಸಿದ್ದಾರೆ.

ಮೈಸೂರು ನಗರದ ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದಾಖಲಾಗಿದ್ದ ಕಳವು ಪ್ರಕರಣದ ಬಗ್ಗೆ ಮಾಧ್ಯಮಗೋಷ್ಠಿಯಲ್ಲಿ ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್ ಮಾಹಿತಿ ನೀಡಿದರು.

ಹಕ್ಕುಪತ್ರ ಇದ್ದವರಿಗೆ ಮತ್ತೇ ಹಕ್ಕು ಪತ್ರ ನೀಡಲಾಗಿದೆ ಎಂದು ಹಾವೇರಿಯಲ್ಲಿ ನಡೆದ ರಾಜ್ಯ ಕಾಂಗ್ರೆಸ್‌ನ ಸಮರ್ಪಣಾ ಸಮಾವೇಶದ ವಿರುದ್ಧ ಆರೋಪ ಕೇಳಿ ಬಂದಿದೆ.

ಕೊಪ್ಪಳದಲ್ಲಿ ಸ್ಟೀಲ್ ಕಾರ್ಖಾನೆ ವಿಸ್ತರಣೆ ವಿರೋಧಿಸಿ ಸ್ವಯಂಪ್ರೇರಿತ ಬಂದ್‌ಗೆ ಕರೆ ನೀಡಲಾಗಿತ್ತು. ಭಾರಿ ಪ್ರತಿಭಟನೆ, ಅಣಕು ಶವಯಾತ್ರೆ ಮೂಲಕ ಆಕ್ರೋಶ ವ್ಯಕ್ತಪಡಿಸಲಾಯಿತು.

ಟೆಹ್ರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ಜಿನೀವಾದಲ್ಲಿ ನಿರ್ಣಾಯಕ ಮಾತುಕತೆಗೆ ಮುನ್ನ ಅಮೆರಿಕದ ಅಧ್ಯಕ್ಷರು ಒತ್ತಡ ತಂತ್ರವನ್ನು ಮಾಡಿದ್ದಾರೆ.

ಪ್ರಧಾನಿ ಮೋದಿ ಇನ್‌ಸ್ಟಾಗ್ರಾಮ್‌ನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗಿಂತ ಎರಡು ಪಟ್ಟು ಹೆಚ್ಚು ಫಾಲೋವರ್‌ಗಳನ್ನು ಹೊಂದಿದ್ದಾರೆ.

ನೀವು ಇಸ್ರೇಲ್‌ನ ಉತ್ತಮ ಸ್ನೇಹಿತ ಮತ್ತು ವಿಶ್ವ ವೇದಿಕೆಯಲ್ಲಿ ಉತ್ತಮ ನಾಯಕ. ನರೇಂದ್ರ ನೀವು ಸ್ನೇಹಿತನಿಗಿಂತ ಹೆಚ್ಚು. ನೀವು ಒಬ್ಬ ಸಹೋದರ ಎಂದು ನೆತನ್ಯಾಹು ತಮ್ಮ ಭಾಷಣದ ಆರಂಭದಲ್ಲಿ ಭಾವನಾತ್ಮಕವಾಗಿ ಹೇಳಿದರು.

ಇಂಡೋನೇಷ್ಯಾ ಮತ್ತು ಲಾವೋಸ್ ನಿಂದ ಆಮದಾಗುವ ಸ್ಫಟಿಕ ಸಿಲಿಕಾನ್ ಫೋಟೊವೋಲ್ಟಾಯಿಕ್ ಕೋಶಗಳು, ಮಾಡ್ಯೂಲ್‌ಗಳ ಆಮದಿನ ಮೇಲೂ ಅಮೆರಿಕವು ವಿಭಿನ್ನ ಸುಂಕಗಳನ್ನು ಘೋಷಿಸಿದೆ.

## ಜೀರಿಗೆ ರಸಂ



**ಬೇಕಾಗುವ ಪದಾರ್ಥಗಳು :**

ಜೀರಿಗೆ - 1/4 ಕಪ್
ಕಾಳು ಮೆಣಸು - 1/4 ಕಪ್
ಕೊತ್ತಂಬರಿ - 1 1/2ಕಪ್
ತೊಗರಿಬೇಳೆ - 2 ಚಮಚ
ಬ್ಯಾಡಗಿ ಮೆಣಸಿನಕಾಯಿ - 2
ಕರಿಬೇವು - 2-5 ಎಲೆ
ಇಂಗು - ಸ್ವಲ್ಪ
ಹುಣಸೆ ರಸ - 1/4 ಕಪ್
ಉಪ್ಪು - ರುಚಿಗೆ ತಕ್ಕಷ್ಟು

**ಮಾಡುವ ವಿಧಾನ :**

ಮೊದಲಿಗೆ ಎಲ್ಲ ಸಾಮಗ್ರಿಗಳನ್ನೂ ಬೇರೆ ಬೇರೆಯಾಗಿ ಮಂದ ಉರಿಯಲ್ಲಿ ಘಮ್ ಎನ್ನುವವರೆಗೂ ಹುರಿದಿಟ್ಟುಕೊಳ್ಳಬೇಕು. ಅದು ಆರಿದ ಮೇಲೆ ನುಣ್ಣಗೆ ಪುಡಿ ಮಾಡಿ. ಒಂದು ಪಾತ್ರೆಯಲ್ಲಿ ಒಂದು ಲೋಟ ನೀರಿನ ಅಳತೆಗೆ ಒಂದು ಚಮಚದಷ್ಟು ಜೀರಿಗೆ ಮೆಣಸಿನ ರಸಂ ಪುಡಿ ಹಾಕಿ, ರುಚಿಗೆ ತಕ್ಕಷ್ಟು ಉಪ್ಪು ಹಾಕಿ, ಸ್ವಲ್ಪ ಹುಣಸೆ ರಸ ಸೇರಿಸಿ ಕುದಿಸಿದರೆ ರುಚಿಯಾದ ಮತ್ತು ಆರೋಗ್ಯಕರ ಜೀರಿಗೆ ರಸಂ ಸವಿಯಲು ಸಿದ್ಧ.

## ಶಿಷ್ಟಾಚಾರ ಬದಿಗಿಟ್ಟು ಪ್ರಧಾನಿ ಮೋದಿಗೆ ನೆತನ್ಯಾಹು ಕುಟುಂಬದಿಂದ ಭವ್ಯ ಸ್ವಾಗತ



ಇಸ್ರೇಲ್ : ಭಾರತ ಮತ್ತು ಇಸ್ರೇಲ್ ನಡುವಿನ ಸ್ನೇಹ ಸಂಬಂಧದಲ್ಲಿ ಮತ್ತೊಂದು ಸುವರ್ಣ ಅಧ್ಯಾಯ ಆರಂಭವಾಗಿದೆ. ಎರಡು ದಿನಗಳ ಅಧಿಕೃತ ಭೇಟಿಗಾಗಿ ಟೆಲ್ ಅವಿವ್‌ನ ಬೆನ್ ಗುರಿಯನ್ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅದ್ದೂರಿ ಸ್ವಾಗತ ದೊರೆತಿದ್ದು, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಅವರ ಪತ್ನಿ ಸಾರಾ ನೆತನ್ಯಾಹು ಅವರು ಶಿಷ್ಟಾಚಾರವನ್ನು ಬದಿಗಿಟ್ಟು ಖುದ್ದಾಗಿ ವಿಮಾನ ನಿಲ್ದಾಣಕ್ಕೆ ಆಗಮಿಸಿ, ಪ್ರಧಾನಿ ಮೋದಿಯವರನ್ನು ಆತ್ಮೀಯವಾಗಿ ಬರಮಾಡಿಕೊಂಡರು.

## ಪ್ರಧಾನಿ ಶೆಹಬಾಜ್ ಷರೀಫ್ ಸತ್ತುಹೋಗುತ್ತಿದ್ದರು : ಟ್ರಂಪ್




ನವದೆಹಲಿ : ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮದ ಮಧ್ಯಸ್ಥಿಕೆಯ ಶ್ರೇಯಸ್ಸನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ ಮತ್ತೊಮ್ಮೆ ಹೊತ್ತುಕೊಂಡಿದ್ದಾರೆ, ತಮ್ಮ ಹಸ್ತಕ್ಷೇಪವು ಉಭಯ ದೇಶಗಳ ನಡುವಿನ ಸಂಭಾವ್ಯ ಪರಮಾಣು ಸಂಘರ್ಷವನ್ನು ತಪ್ಪಿಸಿದೆ ಎಂದು ಸಂಸದರಿಗೆ ತಿಳಿಸಿದ್ದಾರೆ. "ನನ್ನ ಹಸ್ತಕ್ಷೇಪ ಇಲ್ಲದಿದ್ದರೆ ಪಾಕಿಸ್ತಾನದ ಪ್ರಧಾನಿ (ಶೆಹಬಾಜ್ ಷರೀಫ್) ಸತ್ತುಹೋಗುತ್ತಿದ್ದರು ಎಂದು 3.5 ಕೋಟಿ (35 ಮಿಲಿಯನ್) ಜನರು ಹೇಳಿದ್ದಾರೆ" ಎಂದು ತಿಳಿಸಿದರು.

## ಪಾಕಿಸ್ತಾನ ಭಾರತಕ್ಕೆ ದ್ರೋಹ ಬಗೆದಿದೆ : ಪಾಕಿಸ್ತಾನಿ ಪತ್ರಕರ್ತ



ಇಸ್ಲಾಮಾಬಾದ್ : ಪ್ರತಿ ಬಾರಿಯೂ ಪಾಕಿಸ್ತಾನದಿಂದ ದ್ರೋಹವೇ ಸಿಕ್ಕಿದೆ. ಪಾಕಿಸ್ತಾನದ ಆಡಳಿತಗಾರರು ಪದೇ ಪದೇ ಭಾರತದ ಬೆನ್ನಿಗೆ ಚೂರಿ ಹಾಕಿದ್ದಾರೆ ಎಂದು ಈಗ ಪಾಕಿಸ್ತಾನಿ ಜನತೆಯೇ ಒಪ್ಪಿಕೊಳ್ಳುತ್ತಿದ್ದಾರೆ. ಪಾಕಿಸ್ತಾನಿ ಪತ್ರಕರ್ತ ಮೊಯೀದ್ ಪಿರ್ಜಾದಾ ಕೂಡ ಇದೇ ರೀತಿಯ ಹೇಳಿಕೆ ನೀಡಿದ್ದಾರೆ. ಅವರ ಮಾತುಗಳು ಪಾಕಿಸ್ತಾನದ ಸೇನೆ ಮತ್ತು ಪ್ರಸ್ತುತ ಸೇನಾ ಮುಖ್ಯಸ್ಥ ಜನರಲ್ ಅಸಿವ್ ಮುನೀರ್ ಅವರನ್ನು ಬಹಿರಂಗಪಡಿಸಿವೆ. ಪಿರ್ಜಾದಾ ಅವರು 1971ರ ಯುದ್ಧದ ನಂತರ ಪಾಕಿಸ್ತಾನ ಭಾರತಕ್ಕೆ ದ್ರೋಹ ಬಗೆದಿದೆ ಎಂದು ಆರೋಪಿಸಿದ್ದಾರೆ.

## ಎಲ್‌ಮೆಂಚೋ ಸೇನಾ ಕಾರ್ಯಾಚರಣೆಯಲ್ಲಿ ಸಾವು



ಮೆಕ್ಸಿಕೋ : ಮೆಕ್ಸಿಕೋದ ಡ್ರಗ್ ದೊರೆ ಎನಿಸಿಕೊಂಡಿದ್ದ ನೆಮೆಸಿಯೋ ಒಸೆಗ್ವೆರಾ ಅಲಿಯಾಸ್ ಎಲ್ ಮೆಂಚೋ ಸೈನಿಕ ಕಾರ್ಯಾಚರಣೆಯಲ್ಲಿ ಸಾವನ್ನಪ್ಪಿರುವುದಾಗಿ ಮೆಕ್ಸಿಕೋ ಮಾಧ್ಯಮಗಳು ವರದಿ ಮಾಡಿವೆ. ಈ ಸುದ್ದಿಯ ಬೆನ್ನಲ್ಲೇ ಜಾಲಿಸ್ಕೋ ರಾಜ್ಯದ ಹಲವು ಭಾಗಗಳಲ್ಲಿ ಹಿಂಸಾಚಾರ ಭುಗಿಲೆದ್ದಿದೆ. ಮೆಕ್ಸಿಕೋದ ಅತಿ ಪ್ರಭಾವಿ ಡ್ರಗ್ ಕಾರ್ಟೆಲ್ ನಾಯಕನಾಗಿ ಗುರುತಿಸಿಕೊಂಡಿದ್ದ ನೆಮೆಸಿಯೋ ರುಬೇನ್ ಒಸೆಗ್ವೆರಾ ಸರ್ವಾಂಟೆಸ್ ಅಲಿಯಾಸ್ 'ಎಲ್ ಮೆಂಚೋ' ಮೃತಪಟ್ಟಿದ್ದಾರೆ. ಎಲ್ ಮೆಂಚೋ ಸಾವಿನ ಸುದ್ದಿ ಹೊರಬಿದ್ದ ತಕ್ಷಣ ಮೆಕ್ಸಿಕೋದ ರಾಜ್ಯಗಳಲ್ಲಿ ಹಿಂಸಾಚಾರ ಉಂಟಾಯಿತು.

## ವೈಭವ್ ಸೂರ್ಯವಂಶಿಗೆ 50 ಲಕ್ಷದ ಚೆಕ್



ಬಿಹಾರ : ಭಾರತದ ಯುವ ಬ್ಯಾಟಿಂಗ್ ತಾರೆ, ಬಿಹಾರದ 14 ವರ್ಷದ ವೈಭವ್ ಸೂರ್ಯವಂಶಿಗೆ 50ಲಕ್ಷದ ಚೆಕ್ ನೀಡಿ ಬಿಹಾರ ಮುಖ್ಯ ಮಂತ್ರಿ ನಿತೀಶ್ ಕುಮಾರ್ ಅವರು ಇಂದು ತಮ್ಮ ನಿವಾಸದಲ್ಲಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಮತ್ತು ಕ್ರೀಡಾ ಸಚಿವೆ ಶ್ರೇಯಸಿ ಸಿಂಗ್ ಇದ್ದರು. ಇತ್ತೀಚಿಗೆ 19 ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್‌ನಲ್ಲಿ ಭಾರತ ತಂಡ ಇಂಗ್ಲೆಂಡ್ ವಿರುದ್ಧ ಜಯಭೇರಿ ಬಾರಿಸಿ ಕಪ್ ಗೆದ್ದುಕೊಂಡಿತ್ತು. ಫೈನಲ್ ಪಂದ್ಯದಲ್ಲಿ ವೈಭವ್ ಸೂರ್ಯವಂಶಿ 80 ಎಸೆತಗಳನ್ನೆದುರಿಸಿ 15 ಬೌಂಡರಿ ಮತ್ತು 15 ಸಿಕ್ಸರ್‌ಗಳೊಂದಿಗೆ 175 ರನ್ ಗಳಿಸಿದ್ದರು.

## ಚೊಚ್ಚಲ ಸಿಎಂ ಕಪ್ ಬ್ಯಾಡ್ಮಿಂಟನ್ ಟೂರ್ನಿ




ಬೆಂಗಳೂರು: ಸರ್ವಾಂಗೀಣ ಆಟ ಪ್ರದರ್ಶಿಸಿದ ಎಟಿಎಸ್ ಅಟ್ಯಾಕರ್ಸ್ ತಂಡ 2026ರ ಚೊಚ್ಚಲ ಸಿಎಂ ಕಪ್ ಬ್ಯಾಡ್ಮಿಂಟನ್ ಟ್ರೋಫಿಯನ್ನು ಮುಡಿಗೇರಿಸಿಕೊಂಡಿತು. 9 ಡ್ರೀಮ್ಸ್ ಸಂಸ್ಥೆ ಆಯೋಜಿಸಿದ್ದ ಪ್ರತಿಷ್ಠಿತ ಸಿಎಂ ಕಪ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ಪ್ರೋವಿನ್ ಪ್ಯಾಂಥರ್ಸ್ ತಂಡವನ್ನು ಮಣಿಸಿ ಎಟಿಎಸ್ ಅಟ್ಯಾಕರ್ಸ್ ತಂಡ ಗೆಲುವಿನ ನಗೆ ಬೀರಿತು. ಬೆಂಗಳೂರು ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಹಾಗೂ ಮುಖ್ಯಮಂತ್ರಿ ಅವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅವರು ಚಾಂಪಿಯನ್ ಹಾಗೂ ರನ್ನರ್ ಅಪ್ ತಂಡಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು.

## ಭಾರತ ವಿರುದ್ಧ ಆಸ್ಟ್ರೇಲಿಯಾಗೆ 6 ವಿಕೆಟ್ ಗೆಲುವು !



ಭಾರತ ವಿರುದ್ಧ T20 ಸರಣಿಯನ್ನು ಸೋತ ನಂತರ ಆಸ್ಟ್ರೇಲಿಯಾ ಮಹಿಳಾ ಕ್ರಿಕೆಟ್ ತಂಡವು ಏಕದಿನ ಸರಣಿಯಲ್ಲಿ ಅದ್ಭುತ ಪುನರಾಗಮನ ಮಾಡಿದೆ. ಮೂರು ಪಂದ್ಯಗಳ ODI ಸರಣಿಯ ಮೊದಲ ಪಂದ್ಯದಲ್ಲಿ ಭಾರತೀಯ ಮಹಿಳಾ ತಂಡವನ್ನು 6 ವಿಕೆಟ್‌ಗಳಿಂದ ಮಣಿಸಿ 1-0 ಮುನ್ನಡೆ ಸಾಧಿಸಿದೆ. ಬ್ರಿಸ್ಬೇನ್‌ನ ಅಲನ್ ಬಾರ್ಡರ್ ಫೀಲ್ಡ್‌ನಲ್ಲಿ ನಡೆದ ಈ ಪಂದ್ಯದಲ್ಲಿ ಭಾರತ ನೀಡಿದ್ದ 215 ರನ್‌ಗಳ ಗುರಿಯನ್ನು ಬೆನ್ನತ್ತಿದ ಆಸ್ಟ್ರೇಲಿಯಾ 38.2 ಓವರ್‌ಗಳಲ್ಲಿ ಕೇವಲ 4 ವಿಕೆಟ್‌ಗಳನ್ನು ಕಳೆದುಕೊಂಡು ಗೆಲುವು ಸಾಧಿಸಿತು.

## ಸುಂಕ ಜಾರಿ ಮಾಡುವ ಅಧಿಕಾರ ಅಧ್ಯಕ್ಷ ಟ್ರಂಪ್ ಅವರಿಗಿಲ್ಲ



ವಾಷಿಂಗ್ಟನ್ : ಅಮೆರಿಕ ಸಂಸತ್ತಿನ ಅನುಮತಿಯಿಲ್ಲದೇ ಸುಂಕ ಜಾರಿ ಮಾಡುವ ಅಧಿಕಾರ ಅಧ್ಯಕ್ಷ ಟ್ರಂಪ್ ಅವರಿಗಿಲ್ಲ ಎಂದು ಭಾರತೀಯ ಮೂಲದ ಅಮೆರಿಕನ್ ವಕೀಲ ನೀಲ್ ಕತ್ಯಾಲ್ ಹೇಳಿದ್ದಾರೆ. ಸುಪ್ರೀಂಕೋರ್ಟ್ ಆದೇಶವನ್ನು ಪಾಲಿಸದೇ, ಸುಂಕವನ್ನು ಮತ್ತೆ ಶೇ. 15ರಷ್ಟು ಏರಿಕೆ ಮಾಡಿರುವ ಟ್ರಂಪ್ ಕ್ರಮವನ್ನು ಟೀಕಿಸಿ ನೀಲ್ ಟ್ವೀಟ್ ಮಾಡಿದ್ದಾರೆ. 'ಸುಂಕದಿಂದ ಅಮೆರಿಕಕ್ಕೆ ಒಳಿತಾಗುವುದಿದ್ದರೆ ಟ್ರಂಪ್ ಅದನ್ನು ಸಂಸತ್ತಿನ ಬಳಿ ಕೊಂಡೊಯ್ಯಬೇಕಿತ್ತು.

## ಸರ್ಕಾರದಿಂದ 56,000 ಹುದ್ದೆಗಳ ನೇಮಕಾತಿ ಘೋಷಣೆ !



ಧಾರವಾಡ : ಧಾರವಾಡದಲ್ಲಿ ನಡೆದ ಉದ್ಯೋಗ ಆಕಾಂಕ್ಷಿಗಳ ಪ್ರತಿಭಟನೆ ರಾಜ್ಯಾದ್ಯಂತ ಚರ್ಚೆಯ ವಿಚಾರವಾಗಿದೆ. ಈ ಪ್ರತಿಭಟನೆ ಸಂದರ್ಭದಲ್ಲಿಯೇ ಸರ್ಕಾರ 56,000 ಹುದ್ದೆಗಳ ನೇಮಕಾತಿ ಘೋಷಣೆಯನ್ನು ಮಾಡಿದೆ. ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದ ಕಾರ್ಮಿಕ ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್, "ರಾಜ್ಯ ಸರ್ಕಾರದ ಆದೇಶದಂತೆ ರಾಜ್ಯದಾದ್ಯಂತ ಉದ್ಯೋಗ ಮೇಳಗಳನ್ನು ಆಯೋಜಿಸಲಾಗುತ್ತಿದ್ದು, ನಿರೀಕ್ಷೆಯಲ್ಲಿರುವ ಯುವಕರಿಗೆ ವೇದಿಕೆ ಸಿದ್ಧಪಡಿಸಲಾಗುತ್ತಿದೆ" ಎಂದು ಹೇಳಿದರು.

## ಸರ್ಕಾರದ ಅಧಿಕೃತ ಕಾರ್ಯಕ್ರಮದ ಆಹ್ವಾನ ಪತ್ರಿಕೆ ಉರ್ದುವಿನಲ್ಲಿ !



ಬೆಂಗಳೂರು : ಕರ್ನಾಟಕದಲ್ಲಿ ಅಧಿಕೃತ ಆಡಳಿತ ಭಾಷೆಯಾದ ಕನ್ನಡವನ್ನೇ ನಿರ್ಲಕ್ಷಿಸಿ, ರಾಜ್ಯ ಕಾಂಗ್ರೆಸ್ ಸರ್ಕಾರವು ಅಧಿಕೃತ ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ಉರ್ದುವಿನಲ್ಲಿ ಪ್ರಕಟಿಸಿರುವುದು ತೀವ್ರ ಆಕ್ರೋಶಕ್ಕೆ ಗುರಿಯಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಹಿಮೋಫಿಲಿಯಾ ರೋಗಿಗಳಿಗೆ ರೋಗನಿರೋಧಕ ಚಿಕಿತ್ಸೆ ಹಾಗೂ 108 ಆಂಬುಲೆನ್ಸ್ ಸೇವೆಗಳ ಲೋಕಾರ್ಪಣೆಗೊಳಿಸುವ ಕಾರ್ಯಕ್ರಮವನ್ನು ನೆಹರೂ ತಾರಾಲಯದಲ್ಲಿ ಆಯೋಜಿಸಿದೆ. ಈ ಕಾರ್ಯ ಕ್ರಮದ ಆಹ್ವಾನ ಪತ್ರಿಕೆಯನ್ನು ಕೇವಲ ಉರ್ದುವಿನಲ್ಲಿ ಮುದ್ರಿಸಲಾಗಿದೆ ಎನ್ನಲಾಗಿದ್ದು, ಕನ್ನಡ ಪರಸಂಘಟನೆಗಳು ಮತ್ತು ವಿರೋಧ ಪಕ್ಷಗಳ ಕೆಂಗಣ್ಣಿಗೆ ಗುರಿಯಾಗಿದೆ.

## ಒಂದೇ ಕೋಮಿನವರು ಅಪರಾಧ ಕೃತ್ಯ ನಡೆಸುತ್ತಿರುವುದು ಕಾಕತಾಳೀಯವೇ- ಸಿ.ಟಿ ರವಿ



ಬೆಂಗಳೂರು : ಗಣೇಶ ಮೆರವಣಿಗೆ ಕಲ್ಲು ತೂರಾಟ ಮಾಡಿದವರು ಅಪ್ರಾಪ್ತರು, ಚಿಕ್ಕಮಗಳೂರಿನಲ್ಲಿ ಮನೆಗೆ ಕಲ್ಲು ತೂರಿದವರು ಅಪ್ರಾಪ್ತರು, ಶಿವಮೊಗ್ಗದಲ್ಲಿ ಹತ್ಯೆ ನಡೆಸಿದವರು ಅಪ್ರಾಪ್ತರು. ಆದರೆ, ಅಪ್ರಾಪ್ತರಿಗೆ ಇಂತಹ ಮನಸ್ಥಿತಿ ಎಲ್ಲಿಂದ ಬಂತು? ಇಂತಹ ಕೆಲಸ ಮಾಡುವ ಅಪ್ರಾಪ್ತರೆಲ್ಲರೂ ಒಂದೇ ಸಮುದಾಯಕ್ಕೆ ಸೇರಿದವರಾಗುವುದು ಹೇಗೆ? ಇದು ಕಾಕತಾಳೀಯವೋ ಅಥವಾ ಯೋಜಿತ ಷಡ್ಯಂತ್ರವೋ ಎಂದು ಪರಿಶೀಲಿಸಬೇಕು, ದೇಶದ ಉದ್ದಗಲಕ್ಕೂ ಕೋಮುಗಲಭೆ, ಭಯೋತ್ಪಾದನೆ ಷಡ್ಯಂತ್ರದ ಹಿನ್ನೆಲೆಯಲ್ಲಿ ಬಹಳಷ್ಟು ಜನರ ಬಂಧನವಾಗಿದ್ದು, ಇದು ಆಕಸ್ಮಿಕ ಎಂಬಂತೆ ಕಾಣುತ್ತಿಲ್ಲ ಎಂದು ವಿಧಾನ ಪರಿಷತ್ ಸದಸ್ಯರಾದ ರವಿ ಸಿ.ಟಿ ಹೇಳಿದರು.

## ಭಕ್ತರ ಹಣದಲ್ಲಿ ಇಂತಹ ಕಳಪೆ ಕೆಲಸ ಸಹಿಸುವುದಿಲ್ಲ-ಕೆ. ವೆಂಕಟೇಶ್



ಚಾಮರಾಜನಗರ : ರಾಜ್ಯದ ಪವಿತ್ರ ಯಾತ್ರಾ ಸ್ಥಳಗಳಲ್ಲಿ ಒಂದಾದ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳಲ್ಲಿ ಕಳಪೆ ಎಂದು ಕಂಡುಬಂದ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರು ಅಧಿಕಾರಿಗಳು ಹಾಗೂ ಗುತ್ತಿಗೆದಾರರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ. ಕೋಪಗೊಂಡ ಸಚಿವರು, "ಭಕ್ತರ ಹಣದಲ್ಲಿ ಇಂತಹ ಕಳಪೆ ಕೆಲಸ ಸಹಿಸುವುದಿಲ್ಲ" ಎಂದು ಕಿಡಿಕಾರಿದರು. ಕೂಡಲೇ ಕಾಮಗಾರಿಯ ಗುಣಮಟ್ಟವನ್ನು ಮರುಪರಿಶೀಲಿಸುವಂತೆ ಮತ್ತು ತಪ್ಪಿತಸ್ಥ ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸ್ಥಳದಲ್ಲೇ ಸೂಚನೆ ನೀಡಿದರು.

## ಸ್ಥಳೀಯ ಪಂಚಾಯಿತಿಗಳ ಚುನಾವಣೆಯನ್ನು ನಡೆಸಲಾಗುವುದು: ಸಿ.ಎಂ




ಕಾರವಾರ : ಮುಂದಿನ ಜೂನ್ ತಿಂಗಳ ಒಳಗಾಗಿ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳ ಚುನಾವಣೆಯನ್ನು ನಡೆಸಲಾಗುವುದು. ಈ ಬಗ್ಗೆ ಯಾವುದೇ ಗೊಂದಲ ಬೇಡ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆ ಅಂಕೋಲಾ ತಾಲೂಕಿನಲ್ಲಿ ಮಂಜಗುಣಿ - ಗಂಗಾವಳಿಸೇತುವೆ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಗ್ಯಾರಂಟಿ ಯೋಜನೆಗಳ ಜೊತೆಗೆ ರಾಜ್ಯದ ಪ್ರತಿ ವಿಧಾನಸಭಾ ಕ್ಷೇತ್ರದಲ್ಲೂ ಅಭಿವೃದ್ಧಿ ಯೋಜನೆಗಳನ್ನು ಜಾರಿಗೆ ಕೊಟ್ಟು, ಕರ್ನಾಟಕವನ್ನು ಪ್ರಗತಿಯ ಹೊಸದಿಕ್ಕಿನಲ್ಲಿ ಮುನ್ನಡೆಸುತ್ತಿದ್ದೇವೆ ಎಂದು ಹೇಳಿದ್ದಾರೆ.

## ಶೇ.65ರಷ್ಟು ಬೋಧಕ ಸಿಬ್ಬಂದಿ ಹುದ್ದೆಗಳು ಖಾಲಿ ಇದೆ: ಸಿದ್ದರಾಮಯ್ಯ



ಬೆಂಗಳೂರು : ವಿಶ್ವವಿದ್ಯಾಲಯಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಶಿಕ್ಷಕರ ನೇಮಕಾತಿಮತ್ತು ಉನ್ನತ ಶಿಕ್ಷಣ ಕ್ಷೇತ್ರದ ಸವಾಲುಗಳ ಕುರಿತು ಪ್ರಮುಖ ಹೇಳಿಕೆಗಳನ್ನು ನೀಡಿದ್ದಾರೆ. ವಿಶ್ವವಿದ್ಯಾಲಯಗಳಲ್ಲಿ ಮೌಲ್ಯವರ್ಧನೆಗೆ ಶಿಕ್ಷಕರು ಅತ್ಯಗತ್ಯ. ಪ್ರಸ್ತುತ, ವಿಶ್ವವಿದ್ಯಾಲಯಗಳಲ್ಲಿ ಸುಮಾರು ಶೇ.65ರಷ್ಟು ಬೋಧಕ ಸಿಬ್ಬಂದಿ ಹುದ್ದೆಗಳು ಖಾಲಿ ಇವೆ. ಈ ಕೊರತೆಯನ್ನು ನಿಭಾಯಿಸಲು ಸರ್ಕಾರ ಬದ್ಧವಾಗಿದೆ. ಕಳೆದ ವರ್ಷ 2000 ಶಿಕ್ಷಕರನ್ನು ಭರ್ತಿ ಮಾಡಲಾಗಿದೆ. ಮುಂದೆಯೂ ಹಂತ ಹಂತವಾಗಿ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

## ನಕಲಿ ವಿಶ್ವವಿದ್ಯಾಲಯಗಳ ಪಟ್ಟಿ ಬಿಡುಗಡೆ




ನವದೆಹಲಿ: ಕಾಲೇಜು ಪ್ರವೇಶಾತಿ ಪ್ರಕ್ರಿಯೆಗಳು ಆರಂಭವಾಗುತ್ತಿರುವ ಬೆನ್ನಲ್ಲೇ ವಿಶ್ವವಿದ್ಯಾಲಯ ಧನಸಹಾಯ ಆಯೋಗ ಅಚ್ಚರಿಯ ವರದಿಯನ್ನು ಬಹಿರಂಗಪಡಿಸಿದೆ. ಫೆ. 2026ರ ಹೊಸ ಅಪ್ಡೇಟ್ ಪ್ರಕಾರ, ಯುಜಿಸಿ ದೇಶಾದ್ಯಂತ ಕಾರ್ಯನಿರ್ವಹಿಸುತ್ತಿರುವ ನಕಲಿ ವಿಶ್ವವಿದ್ಯಾಲಯಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಭಾರತದ 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಒಟ್ಟು 32 ಶಿಕ್ಷಣ ಸಂಸ್ಥೆಗಳನ್ನು ಅನಧಿಕೃತ ಹಾಗೂ ನಕಲಿ ಎಂದು ಘೋಷಿಸಲಾಗಿದೆ. ಇದರಲ್ಲಿ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿಯೇ 12 ನಕಲಿ ವಿವಿಗಳು ಪತ್ತೆಯಾಗಿವೆ.

## ಗಾಯಗೊಂಡರೂ ಸಹಾಯ ಮಾಡಿದ ಆರ್ಮಿ ಡಾಗ್ 'ಟೈಸನ್'



ಜಮ್ಮು & ಕಾಶ್ಮೀರ : ಆರ್ಮಿ ಡಾಗ್ 'ಟೈಸನ್' ಜಮ್ಮು ಮತ್ತು ಕಾಶ್ಮೀರದ ಕಿಶ್ವಾರ್‌ನ ಛತ್ರೂ ಪ್ರದೇಶದಲ್ಲಿನ ಭಯೋತ್ಪಾದಕರ ಅಡಗುತಾಣಕ್ಕೆ ಸೈನಿಕರನ್ನು ಕರೆದೊಯ್ದು, ಮೂವರು ಜೈಶ್-ಎ-ಮೊಹಮ್ಮದ್ ಉಗ್ರರನ್ನು ಹೊಡೆದುರುಳಿಸಲು ಭದ್ರತಾ ಪಡೆಗಳಿಗೆ ಸಹಾಯ ಮಾಡಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ. ಭಾರತೀಯ ಸೇನೆಯ 2 ಪ್ಯಾರಾಯಲ್ಲಿದ್ದ ಜರ್ಮನ್ ತಳಿಯ ಟೈಸನ್, ಛತ್ರೂದ ಒರಟಾದ ಭೂಪ್ರದೇಶದಲ್ಲಿದ್ದ ಅಡಗುಣತಾಣಕ್ಕೆ ತೆರಳಿದ್ದು, ಉಗ್ರರು ಗುಂಡು ಹಾರಿಸುವಂತೆ ಪ್ರೇರೇಪಿಸಿದೆ. ಕಾಲಿಗೆ ಗುಂಡು ತಗುಲಿದ್ದರೂ ಅಡಗುತಾಣವನ್ನು ಪತ್ತೆಹಚ್ಚಿ, ಉಗ್ರರನ್ನು ಹೊಡೆದುರುಳಿಸಲು ಸೈನ್ಯಕ್ಕೆ ನೆರವಾಗಿದೆ.

## ದಾಳಿಗೆ ಪಿತೂರಿ ನಡೆಸುತ್ತಿದ್ದ ಎಂಟು ಭಯೋತ್ಪಾದಕರ ಬಂಧನ




ನವದೆಹಲಿ - ಪಾಕಿಸ್ತಾನದ ಐಎಸ್‌ಐ ಮತ್ತು ಬಾಂಗ್ಲಾದೇಶ ಮೂಲದ ಭಯೋತ್ಪಾದಕ ಗುಂಪುಗಳ ಬೆಂಬಲದೊಂದಿಗೆ ಭಾರತದಲ್ಲಿ ಪ್ರಮುಖ ಭಯೋತ್ಪಾದಕ ಪಿತೂರಿ ನಡೆಸುತ್ತಿದ್ದ ಆರೋಪದ ಮೇಲೆ ಎಂಟು ಜನರನ್ನು ತಮಿಳುನಾಡು ಮತ್ತು ಪಶ್ಚಿಮ ಬಂಗಾಳದಿಂದ ಬಂಧಿಸಲಾಗಿದೆ. ತಮಿಳುನಾಡಿನ ತಿರುಪ್ಪೂರು ಜಿಲ್ಲೆಯ ಉಡುಪು ಉತ್ಪಾದನಾ ಘಟಕಗಳಿಂದ ಮಿಜಾನೂರ್ ರೆಹಮಾನ್, ಮೊಹಮ್ಮದ್ ಶಬಾತ್, ಉಮರ್, ಮೊಹಮ್ಮದ್ ಲಿಟನ್, ಮೊಹಮ್ಮದ್ ಶಾಹಿದ್ ಮತ್ತು ಮೊಹಮ್ಮದ್ ಉಜ್ವಲ್ ಎಂದು ಗುರುತಿಸಲಾದ ಆರು ಶಂಕಿತರನ್ನು ಬಂಧಿಸಿದ್ದು ಪಶ್ಚಿಮ ಬಂಗಾಳದಿಂದ ಇಬ್ಬರನ್ನು ಬಂಧಿಸಲಾಗಿದೆ.

## ಮುಂದೂಡಲ್ಪಟ್ಟ ಸಂಧಾನಕಾರರ ಸಭೆ



ನವದೆಹಲಿ: ವಿದೇಶಗಳ ಮೇಲಿನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ತೆರಿಗೆಯನ್ನು ಅಮೆರಿಕ ಸುಪ್ರೀಂ ಕೋರ್ಟ್ ರದ್ದುಪಡಿಸಿದ ಬೆನ್ನಲ್ಲೇ, ಮುಕ್ತ ವ್ಯಾಪಾರ ಒಪ್ಪಂದ ಸಂಬಂಧ ಭಾರತ ಮತ್ತು ಅಮೆರಿಕ ನಡುವೆ ನಡೆಯಬೇಕಿದ್ದ ಮುಖ್ಯ ಸಂಧಾನಕಾರರ ಮಟ್ಟದ ಸಭೆಯನ್ನು ಮುಂದೂಡಲಾಗಿದೆ. ಸುಪ್ರೀಂ ಕೋರ್ಟ್ ಹಾಗೂ ಆ ಬಳಿಕ ತೀರ್ಪಿನ ನಂತರದ ಬೆಳವಣಿಗೆಗಳನ್ನು ಗಮನಿಸಿಕೊಂಡು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಎರಡೂ ದೇಶಗಳು ಸಹಮತದಿಂದ ಈ ನಿರ್ಧಾರ ತೆಗೆದುಕೊಂಡಿದ್ದು, ಮಾತುಕತೆಗೆ ಸಂಬಂಧಿಸಿ ಇಬ್ಬರಿಗೂ ಸರಿಹೊಂದುವಂಥ ಹೊಸ ದಿನಾಂಕವನ್ನು ಶೀಘ್ರವೇ ಗೊತ್ತು ಮಾಡಲಿವೆ.

## ಕೇರಳದ ಜನರ ಆತಂಕವನ್ನು ನಿರ್ಲಕ್ಷಿಸಬಾರದು : ಕೇರಳ ಹೈ ಕೋರ್ಟ್




ಕೇರಳ : ಕೇರಳ ಹೈಕೋರ್ಟ್ ಕೇರಳ ಸ್ಟೋರಿ 2 - ಗೋಸ್ ಬಿಯಾಂಡ್ ಸಿನಿಮಾದ ಬಗ್ಗೆ ಚಿಂತನೆ ವ್ಯಕ್ತಪಡಿಸಿದೆ. ಈ ಸಿನಿಮಾ ರಾಜ್ಯವನ್ನು ತಪ್ಪಾಗಿ ತೋರಿಸುತ್ತಿದೆ ಮತ್ತು ಸಮುದಾಯದಲ್ಲಿ ಉದ್ವಿಗ್ನತೆ ಉಂಟುಮಾಡಬಹುದು ಎಂದು ಹೇಳಿದೆ. ಕೇರಳದಲ್ಲಿ ಜನರು ಸಂಪೂರ್ಣ ಸೌಹಾರ್ದತೆಯಲ್ಲಿ ಬದುಕುತ್ತಾರೆ. ಆದರೆ ನೀವು ಇದು ಎಲ್ಲೆಡೆ ನಡೆಯುತ್ತಿದೆ ಎಂದು ತೋರಿಸಿದ್ದೀರಿ. ಇದು ತಪ್ಪು ಸಂದೇಶ ನೀಡಬಹುದು ಮತ್ತು ಜನರ ಭಾವನೆಗಳನ್ನು ಕೆರಳಿಸಬಹುದು. ಅಲ್ಲಿ ಸೆನ್ಸಾರ್ ಬೋರ್ಡ್ ಪಾತ್ರ ಮುಖ್ಯ. ನೀವು ಇದನ್ನು ಪರಿಗಣಿಸಿದ್ದೀರಾ ಎಂದು ನ್ಯಾಯಮೂರ್ತಿ ಬೆಚು ಕುರಿಯನ್ ಥಾಮಸ್ ವಿಚಾರಣೆ ವೇಳೆ ಪ್ರಶ್ನಿಸಿದ್ದಾರೆ.

## ಕೀಳು ಮಟ್ಟದ ರಾಜಕೀಯ ಮಾಡುತ್ತಿರುವುದು ಪ್ರಧಾನಿ ಮೋದಿ : ರಾಗಾ



ನವದೆಹಲಿ : ಪ್ರಧಾನಿ ಮೋದಿ ಕಾಂಗ್ರೆಸ್ ವಿರುದ್ಧ ಕೀಳು ಮಟ್ಟದ ನಗ್ನ ರಾಜಕೀಯ ನಡೆಸುತ್ತಿದೆ ಎಂದು ಆರೋಪಿಸಿದ ಹಿನ್ನೆಲೆಯಲ್ಲಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅದಕ್ಕೆ ತೀವ್ರ ಪ್ರತಿಕ್ರಿಯೆ ನೀಡಿ, ಭಾರತ-ಅಮೆರಿಕಾ ವ್ಯಾಪಾರ ಒಪ್ಪಂದವನ್ನು ನಾಚಿಕೆಗೇಡಿನದ್ದು ಎಂದು ಕರೆದಿದ್ದಾರೆ. ಕೀಳು ಮಟ್ಟದ ರಾಜಕೀಯ ಮಾಡುತ್ತಿರುವುದು ಮೋದಿಯವರೇ ಅವರಿಗೇ ನಾಚಿಕೆಯಾಗಬೇಕು ಎಂದು ಹೇಳಿದ್ದಾರೆ. ಈ ಕುರಿತು ವೀಡಿಯೋ ಸಂದೇಶದಲ್ಲಿ ರಾಹುಲ್ ಗಾಂಧಿ, ಅಮೆರಿಕದೊಂದಿಗೆ ಮಾಡಿಕೊಂಡಿರುವ ಒಪ್ಪಂದವು ದೇಶದ ಹಿತಾಸಕ್ತಿಗಳಿಗೆ ದ್ರೋಹವಾಗಿದೆ ಎಂಬ ತಮ್ಮ ಆರೋಪವನ್ನು ಪುನರುಚ್ಚರಿಸಿದರು.
















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021